## ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆಃ463/2023

**ಸಾಕ್ಷಿಯನ್ನು ದಿಃ 25.09.2025 ರಂದು ಕರೆಸಿ ಪ್ರಮಾಣವಚನ ಭೋದಿಸಲಾಯಿತು.**

| | | | |
|---|---|---|---|
| ಹೆಸರು | ಸಯ್ಯದ್ ಸಲ್ಮಾನ್ | ಸಿಡಬ್ಲ್ಯೂಃ6 | ಪಿಡಬ್ಲ್ಯೂಃ6 |
| ತಂದೆಯ ಹೆಸರು | ಶರ್ಫುದ್ದಿನ್ | | |
| ವಯಸ್ಸು | 31 ವರ್ಷ | | |
| ಉದ್ಯೋಗ | ವ್ಯಾಪಾರ | | |
| ವಾಸಸ್ಥಳ | ಶಬ್ಬೀರ್ ನಗರ, ಹುಣಸೂರು. | | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ**

ನಿಪಿ. 13 ರ ಅಮಾನತ್ತು ಮಹಜರ್ ನಲ್ಲಿರುವ ಸಾಕ್ಷಿ ತನ್ನ ಸಹಿ ನೋಡಿ ಗುರುತಿಸಿದ್ದರಿಂದ, ಸದರಿ ಸಹಿಯನ್ನು ನಿಪಿ. 13(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಈಗ್ಗೆ 2 ವರ್ಷಗಳ ಹಿಂದೆ ಹುಣಸೂರು ಪಟ್ಟಣ ಪೊಲೀಸ್ ಠಾಣೆ ಆವರಣದಲ್ಲಿ ಇರುವ ಕ್ಯಾಂಟೀನ್ ನ ಹತ್ತಿರ ಅಪಘಾತದ ವಿಚಾರವಾಗಿ ಸಹಿ ಮಾಡಿರುತ್ತೇನೆ. ಆ ಸಮಯದಲ್ಲಿ ನಾನೊಬ್ಬನೆ ಇದ್ದೆ. ಆಗ ಸಮಯ 11.00 ಗಂಟೆ ಇರಬಹುದು. ನನ್ನ ಸಮಕ್ಷಮ ಯಾವುದೆ ವಾಹನವನ್ನು ಅಮಾನತ್ತು ಪಡಿಸಿಕೊಂಡಿಲ್ಲ.

**(ಈ ಹಂತದಲ್ಲಿ ಮಾನ್ಯ ಸಸಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಸಲಾಯಿತು)**

**ಪಾಟೀಸವಾಲು ಸಸಅ ರವರಿಂದಃ–**

ದಿಃ 24.01.2023 ರಂದು ಮಧ್ಯಾಹ್ನ 3.00 ಗಂಟೆ ಸಮಯದಲ್ಲಿ ಗ್ರಾಮಾಂತರ ಪೊಲೀಸ್ ಠಾಣಾ ಆವರಣದಲ್ಲಿ ಕೆಎ 45 ಇಸಿ 5786 ನಂಬರ್ ನ ಮಾರುತಿ ಸೂಜೂಕಿ ಬೈಕ್ ಅನ್ನು ನನ್ನ ಸಮಕ್ಷಮ ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ನನ್ನ ಜೊತೆ ಮತ್ತು ಚಾಸಾ 5 ರವರು ನನ್ನ ಜೊತೆ ಇದ್ದರು ಎಂದರೆ ಸರಿ. ನಿಪಿ. 4 ಮತ್ತು 5 ರ ಪೋಟೊಗಳನ್ನು ವಾಹನ ಅಮಾನತ್ತು ಪಡಿಸಿಕೊಳ್ಳುವ ಕಾಲಕ್ಕೆ ತೆಗೆದಿದ್ದರು ಎಂದರೆ ಸರಿ. ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ.ಎ.ಎನ್.ವಕೀಲರಿಂದಃ**

ಇರುವುದಿಲ್ಲ.

**ಮರುವಿಚಾರಣೆ ಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.,

(ಭಾಗ್ಯಮ್ಮ)
ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.ಹುಣಸೂರು.